2. ಹೌದು.

3. ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಆಸ್ಪತ್ರೆಗಳಲ್ಲಿ ತಜ್ಞವೈದ್ಯರ ಕೊರತೆ ನೀಗಿಸುವುದು

506 (5981) ಶ್ರೀ ಶ್ರೀರಾಮ ರೆಡ್ಡಿ (ಬಾಗೇಪಲ್ಲಿ):– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. ಬಾಗೇಪಲ್ಲಿ ಮತ್ತು ಗುಡಿಬಂಡೆ ಪಟ್ಟಣಗಳ ಸಾರ್ವಜನಿಕ ಆಸ್ಪತ್ರಗಳಲ್ಲಿ ತಜ್ಞ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಈ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಕೊರತೆಯನ್ನು ನೀಗಿಸುವ ಸರ್ಕಾರ ಸಂಕಲ್ಪಿಸಿದೆಯೇ;

ಇ. ಇದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?

ಶ್ರೀ ಎನ್. ಚಲುವರಾಯಸ್ವಾಮಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ. ಬಂದಿದೆ.

ಬಾಗೇಪಲ್ಲಿ ಸಾರ್ವಜನಿಕ ಆಸ್ಪತ್ರೆಯಲ್ಲಿ 6 ವೈದ್ಯರ ಹುದ್ದೆಗಳು ಮಂಜೂರಾಗಿದ್ದು 4 ವೈದ್ಯರ ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಗುಡಿಬಂಡೆ ಸಾರ್ವಜನಿಕ ಆಸ್ಪತ್ರೆಯಲ್ಲಿ 5 ವೈದ್ಯರ ಹುದ್ದೆ ಮಂಜೂರಾಗಿದ್ದು 2 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಆ. ಹೌದು

ಇ. ಖಾಲಿ ಇರುವ ತಜ್ಞ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ಖಾಲಿ ಹುದ್ದೆಗಳ ನೇಮಕಾತಿಗಾಗಿ ಕೋಲಾರ ಜಿಲ್ಲಾಧಿಕಾರಿ ಅವರು ದಿನಾಂಕ 16/07/2005ರ ಒಳಗೆ ಅರ್ಜಿ ಸಲ್ಲಿಸಲು ಪ್ರಕಟಣೆಯನ್ನು ಹೊರಡಿಸಿರುತ್ತಾರೆ ಹಾಗೂ ರಾಜ್ಯಮಟ್ಟದಲ್ಲಿ ವೈದ್ಯರ ಕೊರತೆ ನೀಗಿಸಲು ಗುತ್ತಿಗೆ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಈ ಪ್ರಕ್ರಿಯೆ ಸಧ್ಯದಲ್ಲಿಯೇ ಮುಗಿಯಲಿದೆ.

ರಾಜ್ಯದಲ್ಲಿರುವ ನಿವೇಶನ, ವಸತಿ ರಹಿತರ ವಿವರ

507 (5617) ಶ್ರೀ ರವಿ ಸಿ.ಟಿ. (ಚಿಕ್ಕಮಗಳೂರು):– ಮಾನ್ಯ ವಸತಿ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ರಾಜ್ಯದಲ್ಲಿ ನಿವೇಶನ ರಹಿತರ ವಸತಿ ರಹಿತರ ಸಂಖ್ಯೆಯ ವಿವರ ಒದಗಿಸುವುದು?

ಆ) ಚಿಕ್ಕಮಗಳೂರು ಜಿಲ್ಲೆಯಲ್ಲಿ ನಿವೇಶನ ರಹಿತರ, ವಸತಿ ರಹಿತರ ಸಂಖ್ಯೆ ಎಷ್ಟು: ಕ್ಷೇತ್ರವಾರು ಮಾಹಿತಿ ನೀಡುವುದು?

ಇ) ಈ ನಿವೇಶನ ವಸತಿ ರಹಿತರ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಏನು ಕ್ರಮಕ್ಕೈಗೊಂಡಿದೆ?

ಈ) ವಿವಿಧ ಯೋಜನೆಗಳಡಿಯಲ್ಲಿ ಚಿಕ್ಕಮಗಳೂರು ಕ್ಷೇತ್ರಕ್ಕೆ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು: ಪೂರ್ಣ ವಿವರ ನೀಡುವುದು?

ಶ್ರೀ ಅಂಜನಮೂರ್ತಿ (ವಸತಿ ಸಚಿವರು)

ಅ. ರಾಜ್ಯಾದ್ಯಂತ 2003–04 ರಲ್ಲಿ ವಸತಿ ರಹಿತರ ಸಮೀಕ್ಷೆಯನ್ನು ನಡೆಸಿದ್ದು, ಸದರಿ ಸಮೀಕ್ಷೆಯಂತೆ ರಾಜ್ಯದಲ್ಲಿ 12,98,813 ನಿವೇಶನ ರಹಿತರು ಮತ್ತು 12,99,789 ವಸತಿ ರಹಿತರಿದ್ದಾರೆ. ವಿವರಗಳು ಕೆಳಗಿನಂತಿವೆ.